## 2. ಸಾಮಾಜಿಕ ಮತ್ತು ಧಾರ್ಮಿಕ ಸುಧಾರಕರು

### 1. ಶ್ರೀ ನಾರಾಯಣಗುರು



ಶ್ರೀ ನಾರಾಯಣಗುರು

**ಧರ್ಮ ಪರಿಪಾಲನಾ ಯೋಗಂ**

ಶ್ರೀ ನಾರಾಯಣಗುರು ಅವರು 1903ರಲ್ಲಿ **ಧರ್ಮ ಪರಿಪಾಲನಾ ಯೋಗಂ** ಆರಂಭಿಸಿದರು. ಇವರು ಕೇರಳದ ಈಳವು ಎಂಬಲ್ಲಿ ಹುಟ್ಟಿದರು.

**ಈ ಸಂಘಟನೆಯ ಪ್ರಮುಖ ಉದ್ದೇಶವೆಂದರೆ ಹಿಂದುಳಿದ ಮತ್ತು ಶೋಷಣೆಗೊಳಗಾದ ಸಮುದಾಯಗಳ ಸಬಲೀಕರಣ.** ನಾರಾಯಣಗುರು (1854–1928) ಹಾಗೂ ಅವರ ಒಡನಾಡಿಗಳಾದ ಡಾ॥ ಪಲ್ಪು ಮತ್ತು ಕುಮಾರನ್ ಆಸನ್‌ರವರು ಈ ಚಳವಳಿಯನ್ನು ಮುನ್ನಡೆಸಿದರು.

**ಸಾಮಾಜಿಕ ಪ್ರತಿರೋಧದ ಚಳವಳಿ**

ಕೇರಳದ ಸಮಾಜದಲ್ಲೂ ಅತೀ ಜಾತಿ ಅಂತರಗಳ ಸಮಸ್ಯೆಗಳು ವ್ಯಾಪಕವಾಗಿದ್ದು, ಅನೇಕ ಹಿಂದುಳಿದ ಮತ್ತು ದಲಿತ ಸಮುದಾಯಗಳಿಗೆ ಸಾಮಾಜಿಕ ನಿರ್ಬಂಧಗಳನ್ನು ಹೇರಲಾಗಿತ್ತು. ಆ ಕಾಲಘಟ್ಟದಲ್ಲಿ ಈ ಸಮುದಾಯಗಳು ಎಲ್ಲರೂ ಬಳಸಲು ಇದ್ದ ಕೆರೆ ಬಾವಿಗಳಲ್ಲಿ ನೀರನ್ನು ತೆಗೆದುಕೊಳ್ಳಲಾಗುತ್ತಿರಲಿಲ್ಲ. ರಸ್ತೆಗಳ ಮೂಲಕ ಓಡಾಡಲಾಗುತ್ತಿರಲಿಲ್ಲ, ಚಪ್ಪಲಿಗಳನ್ನು ಹಾಕುವಂತಿರಲಿಲ್ಲ. ದೇವಸ್ಥಾನಕ್ಕೆ ಪ್ರವೇಶಿಸುವಂತಿರಲಿಲ್ಲ. ಮಹಿಳೆಯರ ಉಡುಪುಗಳ ಮೇಲೂ ನಿರ್ಬಂಧಗಳನ್ನು ಹೇರಲಾಗಿತ್ತು. ಇಷ್ಟೇ ಅಲ್ಲದೆ ಶಾಲೆಗಳಿಗೂ ಇವರಿಗೆ ಪ್ರವೇಶವಿರಲಿಲ್ಲ. ಕನಿಷ್ಠ ಪ್ರಮಾಣದ ಮಾನವ ಹಕ್ಕುಗಳನ್ನು ಪಡೆಯದ ಈ ಸಮುದಾಯಗಳು ಉಸಿರುಗಟ್ಟಿ ಬದುಕಬೇಕಾದ ಪರಿಸ್ಥಿತಿ ಇತ್ತು. ಈ ವಿಷಯಗಳನ್ನು ಕೈಗೆತ್ತಿಕೊಂಡು ಶ್ರೀ ನಾರಾಯಣಗುರು ಅವರು ತಮ್ಮ ಧರ್ಮ ಪರಿಪಾಲನಾ ಯೋಗಂ ಮೂಲಕ ಸಾಮಾಜಿಕ ಪ್ರತಿರೋಧದ ಚಳವಳಿಗಳನ್ನು ಪ್ರಾರಂಭಿಸಿದರು. **ಮನುಷ್ಯ ಘನತೆಯಿಂದ ಬದುಕುವ ಸಮಾಜದ ನಿರ್ಮಾಣವೇ ಈ ಸಂಘಟನೆಯ ಉದ್ದೇಶವಾಗಿತ್ತು.** ನಾರಾಯಣಗುರು ಅವರ ಪ್ರಮುಖ ಆಶಯ **ಮಾನವ ಕುಲಕ್ಕೆ ಒಂದೇ ಜಾತಿ, ಒಂದೇ ಧರ್ಮ ಮತ್ತು ಒಬ್ಬನೇ ದೇವರು (One Caste, One Religion and One God for Man) ಎಂಬುದು.** ಇದನ್ನು ಸಾಧಿಸಲು ಶಿಕ್ಷಣವೇ ಮಾರ್ಗವೆಂದು ಸಾರಿದರು.

ಕೆಳಸಮುದಾಯಗಳ ಪ್ರವೇಶ ನಿರಾಕರಿಸುತ್ತಿದ್ದ ದೇವಾಲಯಗಳಿಗೆ ಪರ್ಯಾಯ ದೇವಾಲಯಗಳನ್ನು ಕಟ್ಟಿದರು. ನಾರಾಯಣಗುರು ಮತ್ತು ಅವರ ಅನುಯಾಯಿಗಳು **1924ರಲ್ಲಿ ವೈಕಂಸತ್ಯಾಗ್ರಹವೆಂಬ ಶಿವ ದೇವಾಲಯ ಪ್ರವೇಶ ಚಳವಳಿಯನ್ನು ನಡೆಸಿದರು.** ಇದರಲ್ಲಿ ಗಾಂಧೀಜಿಯವರು ಹಾಗೂ ಆತ್ಮಗೌರವ ಚಳವಳಿಯ ರೂವಾರಿಗಳಾದ ಪೆರಿಯಾರ್‌ರು ಭಾಗವಹಿಸಿದ್ದರು. ಗುರುವಾಯೂರು ದೇವಾಲಯ ಪ್ರವೇಶ ಚಳವಳಿಯು ಮತ್ತೊಂದು ಮಹತ್ವದ ಘಟನೆ.

### 2. ಪೆರಿಯಾರ್



**ಪೆರಿಯಾರ್**

**ಬ್ರಾಹ್ಮಣೇತರ ಚಳವಳಿ**

ಇಪ್ಪತ್ತನೆಯ ಶತಮಾನದ ಆರಂಭದಲ್ಲಿ ಬ್ರಾಹ್ಮಣೇತರ ಚಳವಳಿಯೆಂಬ ಹೊಸ ಬಗೆಯ ಚಳವಳಿ ದಕ್ಷಿಣ ಭಾರತದಲ್ಲಿ ಆರಂಭವಾಯಿತು.

ಬಹುಸಂಖ್ಯಾತರಾಗಿದ್ದ ಬ್ರಾಹ್ಮಣೇತರರು ಸರ್ಕಾರಿ ರಂಗದಲ್ಲಿ ಇದ್ದ ಅವಕಾಶಗಳಲ್ಲಿ ತಮ್ಮ ಜನಸಂಖ್ಯೆಗೆ ಅನುಗುಣವಾಗಿ ತಮಗೆ ಪ್ರಾತಿನಿಧ್ಯ ಸಿಗಬೇಕೆಂದು ಹೋರಾಟವನ್ನು ಆರಂಭಿಸಿದರು. ಕರ್ನಾಟಕವೂ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಇದೊಂದು ಪ್ರಮುಖ ಚಳವಳಿಯಾಯಿತು.

ಬ್ರಾಹ್ಮಣೇತರ ಸಮುದಾಯಗಳು ತಮ್ಮ ಮೇಲೆ ಹೇರಲಾಗಿದ್ದ ಸಾಮಾಜಿಕ ನಿರ್ಬಂಧಗಳನ್ನು ಶ್ರೀ ನಾರಾಯಣಗುರು ವಿರೋಧಿಸತೊಡಗಿದರು. ಇದಕ್ಕೆ ಪ್ರಮುಖ ಕಾರಣವಾದದ್ದು ಇಂಗ್ಲಿಷ್ ವಿದ್ಯಾಭ್ಯಾಸದ ವಿಸ್ತರಣೆ. ಇದರ ಜೊತೆಗೆ ಬ್ರಿಟಿಷರು 1870ರ ನಂತರ ತಂದ ಜನಗಣತಿ ವರದಿಗಳು, ಬ್ರಾಹ್ಮಣೇತರರಿಗೆ ತಮ್ಮ ಜನಸಂಖ್ಯೆಯ ಅರಿವನ್ನು ತಂದುಕೊಟ್ಟವು.

**ಆತ್ಮಗೌರವ ಚಳವಳಿ**

ತಮಿಳುನಾಡಿನಲ್ಲಿ 1916ರಲ್ಲಿ ಪ್ರಾರಂಭವಾದ 'ಜಸ್ಟೀಸ್ ಪಾರ್ಟಿ'ಯು ಈ ಬ್ರಾಹ್ಮಣೇತರ ಚಳವಳಿಯನ್ನು ಮುನ್ನಡೆಸಿತು. ಇದು ಹೆಚ್ಚು ಕ್ರಾಂತಿಕಾರಕವಾದ ಹೆಜ್ಜೆಯಾಗಿತ್ತು. ಆ ಹೊಸರೂಪವೇ ಇ.ವಿ. ರಾಮಸ್ವಾಮಿ ನಾಯರ್ ಅವರ ನೇತೃತ್ವದಲ್ಲಿ ಆರಂಭಗೊಂಡ **'ಆತ್ಮಗೌರವ ಚಳವಳಿ'**. 1925ರಲ್ಲಿ ಕಾಂಗ್ರೆಸ್ ಪಕ್ಷದಿಂದ ಹೊರಬಂದ ರಾಮಸ್ವಾಮಿಯವರು 1926ರಲ್ಲಿ ಸೆಲ್ಫ್ ರೆಸ್ಪೆಕ್ಟ್ ಲೀಗ್ ಅನ್ನು ಆರಂಭಿಸಿದರು. ಇವರನ್ನು ಜನರು ಪ್ರೀತಿಯಿಂದ **ಪೆರಿಯಾರ್** (ಹಿರಿಯರು) ಎಂದು ಕರೆದರು. ಪೆರಿಯಾರ್ ತಮಿಳುನಾಡಿನ ಈರೋಡಿನಲ್ಲಿ ಶ್ರೀಮಂತ ಕುಟುಂಬವೊಂದರಲ್ಲಿ ಜನಿಸಿದರು. ವರ್ಣಾಶ್ರಮ ಧರ್ಮದ ಪರವಾಗಿ ಕಾಂಗ್ರೆಸ್ ಇದೆ ಎಂದು ಅದಕ್ಕೆ ಪರ್ಯಾಯವಾದ ದ್ರಾವಿಡ ಚಳವಳಿಯೆಂಬ ಜನಾಂಗೀಯ ಪರಿಕಲ್ಪನೆ ಕೇಂದ್ರಿತ ಚಳವಳಿಯನ್ನು ರೂಪಿಸತೊಡಗಿದರು. ತಮಿಳು ಭಾಷೆಯನ್ನು ದ್ರಾವಿಡರ ಭಾಷೆಯೆಂದರು. ಜಾತಿ ಮತ್ತು ಲಿಂಗ ತಾರತಮ್ಯಗಳನ್ನು ವಿರೋಧಿಸಿ ಸಮಾನತೆಯ ಆಶಯವನ್ನು ಎತ್ತಿಹಿಡಿದರು. 1924ರಲ್ಲಿ ಕೇರಳದ ವೈಕಂನಲ್ಲಿ ಅಸ್ಪೃಶ್ಯರಿಗೆ ದೇವಾಲಯದ ಪ್ರವೇಶದ ಹಕ್ಕಿನ ಹೋರಾಟದಲ್ಲಿ ಭಾಗವಹಿಸಿದ್ದರು. 1939ರಲ್ಲಿ ಜಸ್ಟೀಸ್ ಪಕ್ಷದ ಅಧ್ಯಕ್ಷರಾದರು. **'ದ್ರಾವಿಡ ಕಳಗಂ'** ಎಂಬ ಸಂಘಟನೆಯನ್ನು ಹುಟ್ಟುಹಾಕಿದರು. **'ರಿವೋಲ್ಟ್'** ಪತ್ರಿಕೆಯನ್ನು ಹುಟ್ಟುಹಾಕಿದರು. ಇಂದಿಗೂ ತಮಿಳುನಾಡಿನ ರಾಜಕೀಯ ಕ್ಷೇತ್ರಗಳಲ್ಲಿ ಪೆರಿಯಾರ್‌ರು ಸೈದ್ಧಾಂತಿಕ ಸಂಕೇತವಾಗಿ ಉಳಿದಿದ್ದಾರೆ. ಅಲ್ಲಿನ ರಾಜಕೀಯ ಪಕ್ಷಗಳು 'ದ್ರಾವಿಡ' ಎನ್ನುವ ಹೆಸರನ್ನು ತಮ್ಮ ಪಕ್ಷಗಳ ಹೆಸರಿನಲ್ಲಿ ಉಳಿಸಿಕೊಂಡಿರುವುದೇ ಇದಕ್ಕೆ ದೊಡ್ಡ ಸಾಕ್ಷಿ. ಸಿ. ಅಯೋಥಿದಾಸ್ ಪಂಡಿತ್, ಟಿ.ಎಂ.ನಾಯರ್ ಮುಂತಾದವರು ಆರಂಭಿಸಿ ಸೈದ್ಧಾಂತಿಕವಾಗಿ ರೂಪಿಸಿದ ಬ್ರಾಹ್ಮಣೇತರ ಚಳವಳಿಯನ್ನು ಪೆರಿಯಾರ್‌ರು ಸಾಂಸ್ಕೃತಿಕ ಚಳವಳಿಯನ್ನಾಗಿ ಪರಿವರ್ತಿಸಿದರು. ಎಲ್ಲ ಬಗೆಯ ಶೋಷಣೆಗಳಿಂದ ಮುಕ್ತವಾಗಿ, ಜಾತಿ, ಲಿಂಗ ಅಸಮಾನತೆಗಳಿಂದ ಹೊರಬಂದು 'ಸರ್ವಧರ್ಮಸಹಿಷ್ಣತೆಯ' ಸಮಾಜ ರೂಪುಗೊಳ್ಳಬೇಕು ಎನ್ನುವುದೇ ಅವರ ಬದುಕಿನ ಧ್ಯೇಯವಾಗಿತ್ತು.

## ಅಭ್ಯಾಸ ಪ್ರಶ್ನೋತ್ತರಗಳು

**ಅ) ಕೆಳಗಿನ ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರಿಸಿ.**

**1. ನಾರಾಯಣಗುರು ಅವರ ಪ್ರಮುಖ ಆಶಯ ಏನಾಗಿತ್ತು?**

**ಉತ್ತರ:** ನಾರಾಯಣಗುರು ಅವರ ಪ್ರಮುಖ ಆಶಯ ಮಾನವ ಕುಲಕ್ಕೆ ಒಂದೇ ಜಾತಿ, ಒಂದೇ ಧರ್ಮ ಮತ್ತು ಒಬ್ಬನೇ ದೇವರು (One Caste, One Religion and One God for Man) ಎಂಬುದು.

**2. ನಾರಾಯಣ ಗುರುಗಳು ಯಾವ ಸಂಘಟನೆಯ ಮೂಲಕ ಸಾಮಾಜಿಕ ಪ್ರತಿರೋಧದ ಚಳವಳಿಗಳನ್ನು ಪ್ರಾರಂಭಿಸಿದರು?**

**ಉತ್ತರ:** ನಾರಾಯಣ ಗುರುಗಳು **ಧರ್ಮಪರಿಪಾಲನಾ ಯೋಗಂ** ಸಂಘಟನೆಯ ಮೂಲಕ ಸಾಮಾಜಿಕ ಪ್ರತಿರೋಧದ ಚಳವಳಿಗಳನ್ನು ಪ್ರಾರಂಭಿಸಿದರು.

**3. ಶ್ರೀ ನಾರಾಯಣಗುರು ಅವರು ಯಾವಾಗ ಧರ್ಮ ಪರಿಪಾಲನಾ ಯೋಗಂ ಆರಂಭಿಸಿದರು?**

**ಉತ್ತರ:** ಶ್ರೀ ನಾರಾಯಣಗುರು ಅವರು 1903ರಲ್ಲಿ ಧರ್ಮ ಪರಿಪಾಲನಾ ಯೋಗಂ ಆರಂಭಿಸಿದರು.

**4. ವೈಕಂಸತ್ಯಾಗ್ರಹದಲ್ಲಿ ಯಾರ್ಯಾರು ಭಾಗವಹಿಸಿದ್ದರು?**

**ಉತ್ತರ:** ವೈಕಂಸತ್ಯಾಗ್ರಹದಲ್ಲಿ ಶ್ರೀನಾರಾಯಣ ಗುರು, ಮಹಾತ್ಮ ಗಾಂಧೀಜಿ, ಪೆರಿಯಾರ ಭಾಗವಹಿಸಿದ್ದರು.

**5. ಶ್ರೀ ನಾರಾಯಣಗುರು ಅವರು ವೈಕಂಸತ್ಯಾಗ್ರಹವೆಂಬ ಶಿವ ದೇವಾಲಯ ಪ್ರವೇಶ ಚಳವಳಿಯನ್ನು ಯಾವಾಗ ನಡೆಸಿದರು?**

**ಉತ್ತರ:** ಶ್ರೀ ನಾರಾಯಣಗುರು ಅವರು 1924ರಲ್ಲಿ ವೈಕಂಸತ್ಯಾಗ್ರಹವೆಂಬ ಶಿವ ದೇವಾಲಯ ಪ್ರವೇಶ ಚಳವಳಿಯನ್ನು ನಡೆಸಿದರು.

**6. ಪೆರಿಯಾರ್‌ರವರು ಹುಟ್ಟು ಹಾಕಿದ ಸಂಘಟನೆಯ ಹೆಸರೇನು?**

**ಉತ್ತರ:** ಪೆರಿಯಾರ್‌ರವರು 'ದ್ರಾವಿಡ ಕಳಗಂ' ಎಂಬ ಸಂಘಟನೆಯನ್ನು ಹುಟ್ಟುಹಾಕಿದರು.

**7. ಪೆರಿಯಾರ್‌ರವರ ಮೂಲ ಹೆಸರೇನು?**

**ಉತ್ತರ:** ಪೆರಿಯಾರ್‌ರವರ ಮೂಲ ಹೆಸರು ಇ.ವಿ. ರಾಮಸ್ವಾಮಿ ನಾಯ್ಕರ್.

**8. ಆತ್ಮಗೌರವ ಚಳವಳಿಯನ್ನು ಆರಂಭಿಸಿದವರು ಯಾರು?**

**ಉತ್ತರ:** ಆತ್ಮಗೌರವ ಚಳವಳಿಯನ್ನು ಆರಂಭಿಸಿದವರು ಇ.ವಿ. ರಾಮಸ್ವಾಮಿ ನಾಯ್ಕರ್.

**9. ಇ.ವಿ. ರಾಮಸ್ವಾಮಿ ನಾಯರ್‌ರವರು ಎಷ್ಟರಲ್ಲಿ ಸೆಲ್ಫ್ ರೆಸ್ಪೆಕ್ಟ್ ಲೀಗ್ ಅನ್ನು ಆರಂಭಿಸಿದರು?**

**ಉತ್ತರ:** ಇ.ವಿ. ರಾಮಸ್ವಾಮಿ ನಾಯ್ಕರ್‌ರವರು 1926ರಲ್ಲಿ ಸೆಲ್ಫ್ ರೆಸ್ಪೆಕ್ಟ್ ಲೀಗ್ ಅನ್ನು ಆರಂಭಿಸಿದರು.

**10. ಪೆರಿಯಾರ್ ಅವರ ಬದುಕಿನ ಧ್ಯೇಯವೇನಾಗಿತ್ತು?**

**ಉತ್ತರ:** ಎಲ್ಲ ಬಗೆಯ ಶೋಷಣೆಗಳಿಂದ ಮುಕ್ತವಾಗಿ, ಜಾತಿ, ಲಿಂಗ ಅಸಮಾನತೆಗಳಿಂದ ಹೊರಬಂದು 'ಸರ್ವಧರ್ಮಸಹಿಷ್ಣತೆಯ' ಸಮಾಜ ರೂಪುಗೊಳ್ಳಬೇಕು ಎನ್ನುವುದೇ ಅವರ ಬದುಕಿನ ಧ್ಯೇಯವಾಗಿತ್ತು.

**ಆ) ಕೆಳಗಿನ ಪ್ರಶ್ನೆಗಳಿಗೆ ಮೂರು-ನಾಲ್ಕು ವಾಕ್ಯದಲ್ಲಿ ಉತ್ತರಿಸಿ**

**1. ನಾರಾಯಣಗುರು ಧರ್ಮಪರಿಪಾಲನಾ ಯೋಗಂ ಸಂಘಟನೆಯ ಉದ್ದೇಶವೇನಾಗಿತ್ತು?**

**ಉತ್ತರ:** ನಾರಾಯಣಗುರು ಧರ್ಮಪರಿಪಾಲನಾ ಯೋಗಂ ಸಂಘಟನೆಯ ಪ್ರಮುಖ ಉದ್ದೇಶವೆಂದರೆ ಹಿಂದುಳಿದ ಮತ್ತು ಶೋಷಣೆಗೊಳಗಾದ ಸಮುದಾಯಗಳ ಸಬಲೀಕರಣ ಮತ್ತು ಮನುಷ್ಯ ಘನತೆಯಿಂದ ಬದುಕುವ ಸಮಾಜದ ನಿರ್ಮಾಣವೇ ಮಾಡುವುದಾಗಿತ್ತು.

**2. ನಾರಾಯಣಗುರು ಧರ್ಮಪರಿಪಾಲನಾ ಯೋಗಂ ಸಂಘಟನೆಯ ಕೊಡುಗೆಗಳನ್ನು ತಿಳಿಸಿ.**

**ಉತ್ತರ:** ಧರ್ಮಪರಿಪಾಲನಾ ಯೋಗಂ ಸಂಘಟನೆಯ ಕೊಡುಗೆಗಳು

1. ಸಾಮಾಜಿಕ ಪ್ರತಿರೋಧದ ಚಳವಳಿಗಳಿಗಳನ್ನು ಆರಂಭಿಸಿಲಾಯಿತು.
2. ಹಿಂದುಳಿದ ಮತ್ತು ಶೋಷಣೆಗೊಳಗಾದ ಸಮುದಾಯಗಳ ಸಬಲೀಕರಣಕ್ಕೆ ಶ್ರಮಿಸಿದ್ದು.
3. ಮನುಷ್ಯ ಘನತೆಯಿಂದ ಬದುಕುವ ಸಮಾಜದ ನಿರ್ಮಾಣ ಮಾಡಲು ಚಳವಳಿ ಆರಂಭಿಸಿಲಾಯಿತು.
4. ಕೆಳಸಮುದಾಯಗಳ ಪ್ರವೇಶ ನಿರಾಕರಿಸುತ್ತಿದ್ದ ದೇವಾಲಯಗಳಿಗೆ ಪರ್ಯಾಯ ದೇವಾಲಯಗಳ ನಿರ್ಮಾಣ.
5. ವೈಕಂಸತ್ಯಾಗ್ರಹವೆಂಬ ಶಿವ ದೇವಾಲಯ ಪ್ರವೇಶ ಚಳವಳಿಯನ್ನು ನಡೆಸಲಾಯಿತು.
6. ಗುರುವಾಯೂರು ದೇವಾಲಯ ಪ್ರವೇಶ ಚಳವಳಿಯು ಮತ್ತೊಂದು ಮಹತ್ವದ ಘಟನೆ.

**2. ನಾರಾಯಣ ಗುರುಗಳ ಕಾಲದಲ್ಲಿ ಕೇರಳದ ಸಮಾಜದಲ್ಲಿ ಯಾವ ಪರಿಸ್ಥಿತಿ ಇದ್ದಿತು?**

**ಉತ್ತರ:** ನಾರಾಯಣ ಗುರುಗಳ ಕಾಲದಲ್ಲಿ ಕೇರಳದ ಸಮಾಜದಲ್ಲಿ ಅತೀ ಜಾತಿ ಅಂತರಗಳ ಸಮಸ್ಯೆಗಳು ವ್ಯಾಪಕವಾಗಿದ್ದು, ಅನೇಕ ಹಿಂದುಳಿದ ಮತ್ತು ದಲಿತ ಸಮುದಾಯಗಳಿಗೆ ಸಾಮಾಜಿಕ ನಿರ್ಬಂಧಗಳನ್ನು ಹೇರಲಾಗಿತ್ತು. ಈ ಸಮುದಾಯಗಳು ಎಲ್ಲರೂ ಬಳಸಲು ಇದ್ದ ಕೆರೆ ಬಾವಿಗಳಲ್ಲಿ ನೀರನ್ನು ತೆಗೆದುಕೊಳ್ಳಲಾಗುತ್ತಿರಲಿಲ್ಲ. ರಸ್ತೆಗಳ ಮೂಲಕ ಓಡಾಡಲಾಗುತ್ತಿರಲಿಲ್ಲ, ಚಪ್ಪಲಿಗಳನ್ನು ಹಾಕುವಂತಿರಲಿಲ್ಲ. ದೇವಸ್ಥಾನಕ್ಕೆ ಪ್ರವೇಶಿಸುವಂತಿರಲಿಲ್ಲ. ಮಹಿಳೆಯರ ಉಡುಪುಗಳ ಮೇಲೂ ನಿರ್ಬಂಧಗಳನ್ನು ಹೇರಲಾಗಿತ್ತು. ಇಷ್ಟೇ ಅಲ್ಲದೆ ಶಾಲೆಗಳಿಗೂ ಇವರಿಗೆ ಪ್ರವೇಶವಿರಲಿಲ್ಲ. ಕನಿಷ್ಠ ಪ್ರಮಾಣದ ಮಾನವ ಹಕ್ಕುಗಳನ್ನು ಪಡೆಯದ ಈ ಸಮುದಾಯಗಳು ಉಸಿರುಗಟ್ಟಿ ಬದುಕಬೇಕಾದ ಪರಿಸ್ಥಿತಿ ಇತ್ತು.

**4. ಪೆರಿಯಾರ್ ಚಳವಳಿಯ ಮುಖ್ಯಾಂಶಗಳನ್ನು ಪಟ್ಟಿ ಮಾಡಿ.**

ತಮಿಳುನಾಡಿನಲ್ಲಿ ಇ.ವಿ. ರಾಮಸ್ವಾಮಿ ನಾಯ್ಕರ್ ಇವರನ್ನು ಜನರು ಪ್ರೀತಿಯಿಂದ ಪೆರಿಯಾರ್ ಎಂದು ಕರೆದರು. ಇವರ ನೇತೃತ್ವದಲ್ಲಿ ನಡೆದ ಚಳವಳಿಯನ್ನು ಪೆರಿಯಾರ್ ಚಳವಳಿ ಎಂದು ಕರೆಯಲಾಗುತ್ತದೆ. ಈ ಚಳವಳಿಯ ಮೂಲಕ ದ್ರಾವಿಡ ಚಳವಳಿಯೆಂಬ ಜನಾಂಗೀಯ ಪರಿಕಲ್ಪನೆ ಕೇಂದ್ರಿತ ಚಳವಳಿಯನ್ನು ರೂಪಿಸಿದರು. ತಮಿಳು ಭಾಷೆಯನ್ನು ದ್ರಾವಿಡರ ಭಾಷೆಯೆಂದರು. ಜಾತಿ ಮತ್ತು ಲಿಂಗ ತಾರತಮ್ಯಗಳನ್ನು ವಿರೋಧಿಸಿ ಸಮಾನತೆಯ ಆಶಯವನ್ನು ಎತ್ತಿಹಿಡಿದರು. 1924ರಲ್ಲಿ ಕೇರಳದ ವೈಕಂನಲ್ಲಿ ಅಸ್ಪೃಶ್ಯರಿಗೆ ದೇವಾಲಯದ ಪ್ರವೇಶದ ಹಕ್ಕಿನ ಹೋರಾಟದಲ್ಲಿ ಭಾಗವಹಿಸಿದ್ದರು. 1939ರಲ್ಲಿ ಜಸ್ಟೀಸ್ ಪಕ್ಷದ ಅಧ್ಯಕ್ಷರಾದರು. **'ದ್ರಾವಿಡ ಕಳಗಂ'** ಎಂಬ ಸಂಘಟನೆಯನ್ನು ಹುಟ್ಟುಹಾಕಿದರು. **'ರಿವೋಲ್ಟ್'** ಪತ್ರಿಕೆಯನ್ನು ಹುಟ್ಟುಹಾಕಿದರು. ಸಿ. ಅಯೋಥಿದಾಸ್ ಪಂಡಿತ್, ಟಿ.ಎಂ.ನಾಯರ್ ಮುಂತಾದವರು ಆರಂಭಿಸಿ ಸೈದ್ಧಾಂತಿಕವಾಗಿ ರೂಪಿಸಿದ ಬ್ರಾಹ್ಮಣೇತರ ಚಳವಳಿಯನ್ನು ಪೆರಿಯಾರ್‌ರು ಸಾಂಸ್ಕೃತಿಕ ಚಳವಳಿಯನ್ನಾಗಿ ಪರಿವರ್ತಿಸಿದರು.